# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಮೌನವು ಮನಸ್ಸನ್ನು ಶುದ್ಧಿ ಮಾಡುವುದು
ಸ್ನಾನವು ದೇಹವನ್ನು ಶುದ್ಧಿ ಮಾಡುವುದು
ಧ್ಯಾನವು ಬುದ್ಧಿಯನ್ನು ಶುದ್ಧಿ ಮಾಡುವುದು
ಸತ್ಯವು ಜ್ಞಾನವನ್ನು ಶುದ್ಧಿ ಮಾಡುವುದು
ಪ್ರಾರ್ಥನೆಯು ಆತ್ಮವನ್ನು ಶುದ್ಧಿ ಮಾಡುವುದು
ದಾನವು ಸಂಪಾದನೆಯನ್ನು ಶುದ್ಧಿ ಮಾಡುವುದು
ಉಪವಾಸ ಆರೋಗ್ಯವನ್ನು ಶುದ್ಧಿ ಮಾಡುವುದು
ಕ್ಷಮೆಯು ಸಂಬಂಧವನ್ನು ಶುದ್ಧಿ ಮಾಡುವುದು
ಧರ್ಮದ ದಾರಿ ಎಲ್ಲವನ್ನು ಶುದ್ಧಿ ಮಾಡುವುದು
ಮಾನವವೀಯತೆ ಸ್ವರ್ಗದ ದಾರಿ ತೋರಿಸುವುದು


**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 21-02-2025 to 27-02-2025 ಬೆಲೆ: 7-00 ಸಂಪುಟ–4 ಸಂಚಿಕೆ–35 ಪುಟಗಳು–6



ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು




ಈ ವರ್ಷ ಅವದಿಗೂ ಮುನ್ನ ಬೇಸಿಗೆ ಶುರುವಾಗುತ್ತಿದ್ದು, ತಾಪಮಾನದಲ್ಲಿ ದಿಡೀರ್ ಹೆಚ್ಚಳ ಆಗಲಿದೆ. ಇದು ಶುಷ್ಕ ಹವಮಾನದ ಮುನ್ಸೂಚನೆಯಾಗಿದ್ದು, ವಾಯುವ್ಯ ಮತ್ತು ಉತ್ತರ ಮಾರುತಗಳು ಬೆಚ್ಚಗಿರುವುದು ಇದಕ್ಕೆ ಕಾರಣವೆಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹಾಗಾಗಿ ಆದಷ್ಟು ಮದ್ಯಾಹ್ನದ ಬಿಸಿಲಿಗೆ ಓಡಾಡುವುದನ್ನು ತಪ್ಪಿಸುವುದು ಮತ್ತು ಹೆಚ್ಚಿನ ಪ್ರಮಾಣದಲ್ಲಿ ನೀರು ಕುಡಿಯುವುದರೊಂದಿಗೆ ದೇಹ ನೀರ್ಜಲೀಕರಣ ಆಗದಂತೆ ಎಚ್ಚರ ವಹಿಸುವುದು ಉತ್ತಮ ಎನ್ನುವುದು ವೈದ್ಯರ ಸಲಹೆಯಾಗಿದೆ.

## ಜಾತಿಗಣತಿ ವರದಿ ಅನುಷ್ಠಾನ ಶತಸಿದ್ಧ: ಸಿದ್ದರಾಮಯ್ಯ



ಜಾತಿಗಣತಿ ವರದಿಯು ವೈಜ್ಞಾನಿಕವಾಗಿ ನಡೆದಿದ್ದು ಅದನ್ನು ನಮ್ಮ ಸರ್ಕಾರ ಖಂಡಿತವಾಗಿಯೂ ಜಾರಿಗೊಳಿಸುತ್ತದೆ ಇದರಲ್ಲಿ ಯಾವುದೇ ಸಂಶಯ ಬೇಡ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಹಿಂದುಳಿದ ವರ್ಗಗಳ ಮುಖಂಡರು ಹಾಗೂ ಹಿಂದುಳಿದ ವರ್ಗಗಳ ಸಂಘ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ವಿಧಾನಸೌಧದಲ್ಲಿ ನಡೆದ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಜಾತಿ ಗಣತಿ ಅನುಷ್ಠಾನಕ್ಕೆ ಒಕ್ಕೊರಲಿನಿಂದ ಒತ್ತಾಯ ಬಂದ ಸಂದರ್ಭದಲ್ಲಿ ಅದಕ್ಕೆ ಮುಖ್ಯಮಂತ್ರಿಗಳು ಪ್ರತಿಕ್ರಿಯೆ **3ನೇ ಪುಟಕ್ಕೆ**

## ದೈವಾರಾಧನೆ ಮನೋರಂಜನಾ ಕಲೆಯಲ್ಲ –ವೇದವ್ಯಾಸ ಕಾಮತ್



**ಮಂಗಳೂರು:** ದೈವರಾಧನೆ ಎನ್ನುವುದು ಸಾವಿರಾರು ವರ್ಷಗಳಿಂದಲೂ ತುಳುನಾಡಿನ ಶ್ರದ್ಧಾ ಭಕ್ತಿಯ ಇತಿಹಾಸ ಹೊಂದಿರುವ ಧಾರ್ಮಿಕ ಆಚರಣೆಯಾಗಿದೆ ಹೊರತು ಅದು ಯಾವುದೇ ಮನೋರಂಜನೆಯ ಕಲೆಯಲ್ಲ. ಮಕ್ಕಳಲ್ಲಿ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಮೋಜು ಮಸ್ತಿಗಳಿಂದ ಕೂಡಿದ ಪ್ರತಿಭಾ ಕಾರಂಜಿಗಳಿಗೆ ನಮ್ಮ ವಿರೋಧವಿಲ್ಲ. ಆದರೆ, ದೈವಗಳು ವೇದಿಕೆಯ ಮೇಲೆ ನರ್ತನ ಮಾಡಿ ತೋರಿಸುವಂತಹ ವಸ್ತುವಲ್ಲ ಎಂಬ ಕನಿಷ್ಠ ಜ್ಞಾನವೂ ಈ ಕಾಂಗ್ರೆಸ್ ಸರ್ಕಾರಕ್ಕೆ ಇಲ್ಲವೇ ಎಂದು ಶಾಸಕ ವೇದವ್ಯಾಸ ಕಾಮತ್ ಪ್ರಶ್ನಿಸಿದರು. ಇದು ಖಂಡಿತವಾಗಿಯೂ ಬೇಜವಾಬ್ದಾರಿ ನಡೆಯಾಗಿದ್ದು ಸಮಸ್ತ ತುಳು ನಾಡಿನ ದೈವಭಕ್ತರುಗಳ ನಂಬಿಕೆಗೆ ಧಕ್ಕೆಯಾಗಿದೆ. ನಾಡಿನ ವಿಭಿನ್ನ **3ನೇ ಪುಟಕ್ಕೆ**

## ಕಲ್ಲು ಶಿಲೆಯಾಗಬೇಕಾದರೆ ಪೆಟ್ಟು ಬೀಳಬೇಕು –ಡಿ. ಕೆ. ಸುರೇಶ್



**ಬೆಂಗಳೂರು:** ಡಿ.ಕೆ. ಶಿವಕುಮಾರ್ ಅವರಿಗೆ ಒಳ್ಳೆಯದಾಗಲಿ ಎಂಬ ಭಾವನೆ ಎಲ್ಲರಿಗೂ ಇದೆ. ಹೀಗಾಗಿ ಎಲ್ಲರೂ ಮಾತನಾಡುತ್ತಿದ್ದಾರೆ. ಬಂಡೆ ಪ್ರಕೃತಿ, ಕಡೆದರೆ ಆಕೃತಿ, ಪೂಜಿಸಿದರೆ ಸಂಸ್ಕೃತಿ ಎಂದು ಶಿವಕುಮಾರ್ ಅವರು ಆಗಾಗ್ಗೆ ಹೇಳುತ್ತಿರುತ್ತಾರೆ. ಕಲ್ಲಿಗೆ ಪೆಟ್ಟು ಬಿದ್ದಾಗಲೇ ಶಿಲೆಯಾಗಿ ಮಾರ್ಪಾಡಾಗುತ್ತದೆ ಎಂದು ಮಾಜಿ ಸಂಸದ ಡಿ. ಕೆ. ಸುರೇಶ್ ತಿಳಿಸಿದರು. ಎಲ್ಲರೂ ಸೇರಿ ಒಳ್ಳೆಯದನ್ನು ಬಯಸುತ್ತಿದ್ದು ಒಳ್ಳೆಯದೇ ಆಗುತ್ತದೆ. ಯಾರಿಗಾದರೂ ಒಳ್ಳೆಯದಾಗಬೇಕಾದರೆ ಹತ್ತಾರು ಜನರ ಪೆಟ್ಟು ಬೀಳಬೇಕು. ಅದನ್ನು ನಾವು ತಪ್ಪಾಗಿ ತಿಳಿಯಬಾರದು **3ನೇ ಪುಟಕ್ಕೆ**







# ಸುದ್ದಿ ತುಣುಕು

ಮೊದಲು ನಮ್ಮ ಮೆಟ್ರೋದಲ್ಲಿ ದಿನಕ್ಕೆ 8.5 ಲಕ್ಷ ಪ್ರಯಾಣಿಕರು ಸಂಚಾರ ನಡೆಸುತ್ತಿದ್ದರು. ಆದರೆ, ದರ ಏರಿಕೆ ಬಳಿಕ ಈ ಸಂಖ್ಯೆ ಅಂದಾಜು 6.3 ಲಕ್ಷಕ್ಕೆ ಇಳಿದಿದ್ದು, ಸುಮಾರು 2 ಲಕ್ಷಕ್ಕೂ ಹೆಚ್ಚು ಪ್ರಯಾಣಿಕರ ಸಂಖ್ಯೆ ಕುಗ್ಗಿದೆ ಎನ್ನಲಾಗಿದೆ.

ಯಾವುದೇ ರಾಜಕೀಯ ಅಜೆಂಡಾ ಇಟ್ಟುಕೊಂಡು ದೆಹಲಿಗೆ ಹೋಗಿರಲಿಲ್ಲ. ನೂತನ ಎಐಸಿಸಿ ಕಚೇರಿ ನೋಡಲು ದೆಹಲಿಗೆ ಹೋಗಿದ್ದೆ ಎಂದು ಗೃಹ ಸಚಿವ ಪರಮೇಶ್ವರ್ ಪ್ರತಿಕ್ರಿಯೆ ನೀಡಿದ್ದಾರೆ.

ಅತಿಯಾದ ಜಾಹೀರಾತುಗಳಿಂದ ಸಿನಿಮಾ ಪ್ರದರ್ಶನವನ್ನು ತಡ ಮಾಡಿದ್ದರಿಂದ ಗ್ರಾಹಕರ ಸಮಯ ವ್ಯರ್ಥವಾಗಿದೆ ಎಂದು ಪಿವಿಆರ್‌ಗೆ ಗ್ರಾಹಕರ ವ್ಯಾಜ್ಯ ಪರಿಹಾರ ಆಯೋಗ ದಂಡ ವಿಧಿಸಿದೆ.

ಕೇಂದ್ರ ಸರ್ಕಾರಿ ನೌಕರರಿಗೆ ತಹಶೀಲ್ದಾರ್ ಜಾತಿ ಪ್ರಮಾಣಪತ್ರ ವಿತರಿಸಿದ್ದರೆ, ಅದನ್ನು ಪರಿಶೀಲಿಸುವ ಅಧಿಕಾರ ಇರುವುದು ಜಿಲ್ಲಾ ಜಾತಿ ಪ್ರಮಾಣಪತ್ರ ಪರಿಶೀಲನಾ ಸಮಿತಿಗೆ ಮಾತ್ರ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ದಾಖಲೆ ಇಲ್ಲದೆ ಕೋಟ್ಯಂತರ ರೂಪಾಯಿಯನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ ನೆರೆಯ ದೇಶ ಶ್ರೀಲಂಕಾದ ಇಬ್ಬರು ಆರೋಪಿಗಳು ಸೇರಿದಂತೆ ಮೂವರನ್ನು ಬೆಂಗಳೂರು ವಿಭಾಗದ ಜಾರಿ ನಿರ್ದೇಶನಾಲಯ (ಇ.ಡಿ.) ಅಧಿಕಾರಿಗಳು ಸೆರೆ ಹಿಡಿದಿದ್ದಾರೆ.

ನೈರುತ್ಯ ರೈಲ್ವೆ ವಿವಿಧೆಡೆ ಅಳವಡಿಸಿರುವ ಸೌರಫಲಕಗಳಿಂದ 57 ಲಕ್ಷ ಯೂನಿಟ್ ವಿದ್ಯುತ್ ಉತ್ಪಾದನೆಯಾಗಿದ್ದು, ಇದರಿಂದಾಗಿ 2.81 ಕೋಟಿ ರೂಪಾಯಿ ಉಳಿತಾಯವಾಗಿದೆ.

ದಲಿತ ಸಮಾವೇಶ ಮಾಡಬೇಡಿ ಅಂತ ಹೈಕಮಾಂಡ್ ಹೇಳಿಲ್ಲ. ಆದರೆ, ಅವರು ಹೇಳಿದಾಗ ಮಾತ್ರ ಈ ಸಮಾವೇಶ ಮಾಡುತ್ತೇವೆ ಎಂದು ಸಚಿವ ಕೆ.ಹೆಚ್.ಮುನಿಯಪ್ಪ ಹೇಳಿದರು.

ಮುಡಾ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ಮತ್ತು ಅವರ ಪತ್ನಿ, ಬಾಮೈದನಿಗೆ ಲೋಕಾಯುಕ್ತ ಕ್ಲೀನ್‌ಚಿಟ್ ನೀಡಿದ್ದು, ಇದೊಂದು ಪೂರ್ವ ನಿಯೋಜಿತವಾಗಿ ತಯಾರಿಸಿದ ವರದಿ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ದೂರಿದರು.

ಮುಡಾ ಹಗರಣದಲ್ಲಿ ಸಾಕ್ಷ್ಯಾಧಾರಗಳ ಕೊರತೆಯಿಂದ ಬಿ ರಿಪೋರ್ಟ್ ಸಲ್ಲಿಸುತ್ತೇವೆ ಎಂದು ಮೈಸೂರು ಲೋಕಾಯುಕ್ತರು ನೋಟಿಸ್ ನೀಡಿದ್ದಾರೆ. ಈ ಬಗ್ಗೆ ಒಂದು ವಾರದಲ್ಲಿ ತಕರಾರು ಅರ್ಜಿ ಸಲ್ಲಿಸುತ್ತೇನೆ ಎಂದು ದೂರುದಾರ ಸ್ನೇಹಮಯಿ ಕೃಷ್ಣ ತಿಳಿಸಿದ್ದಾರೆ.

ಅಕ್ರಮ ಹಣ ವರ್ಗಾವಣೆ ಅಪರಾಧದ ಕುರಿತ ತನಿಖೆ ನಡೆಸುವುದು ಕಾನೂನುಬದ್ಧ ಸರ್ಕಾರದ ಹಿತಾಸಕ್ತಿ ಎಂದಿರುವ ಹೈಕೋರ್ಟ್, ಆಧಾರ್ ದತ್ತಾಂಶ ಪರಿಶೀಲನೆಗೆ ಇ.ಡಿಗೆ ಅವಕಾಶ ಕಲ್ಪಿಸುವಂತೆ ಭಾರತೀಯ ವಿಶಿಷ್ಟ ಗುರುತಿನ ಪ್ರಾಧಿಕಾರಕ್ಕೆ ಸೂಚನೆ ನೀಡಿತು.

ಕೇತಗಾನಹಳ್ಳಿಯಲ್ಲಿ ತಮಗೆ ಸೇರಿದ ಜಮೀನನ್ನು ನಾನು 40 ವರ್ಷಗಳ ಹಿಂದೆಯೇ ಖರೀದಿಸಿದ್ದೇನೆ. ಇದರಲ್ಲಿ ಯಾವುದೇ ಅಕ್ರಮ ನಡೆದಿಲ್ಲ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದರು.

ಅನ್ನಭಾಗ್ಯ ಯೋಜನೆಯಡಿ ಪ್ರತಿ ಫಲಾನುಭವಿಗೆ ಹಣದ ಬದಲು ಅಕ್ಕಿ ಕೊಡಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಹಸಿವು ಮುಕ್ತ ಕರ್ನಾಟಕ ನಿರ್ಮಿಸುವುದು ನಮ್ಮ ಮುಖ್ಯ ಉದ್ದೇಶ ಎಂದು ಸಚಿವ ಕೆ. ಹೆಚ್. ಮುನಿಯಪ್ಪ ಹೇಳಿದ್ದಾರೆ.

ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್, ಬಿಜೆಪಿ ಸಂಸದ ತೇಜಸ್ವಿ ಸೂರ್ಯ, ಕೇಂದ್ರ ಸಚಿವ ರಾಮ್ ಮೋಹನ್ ನಾಯ್ಡು ಮತ್ತು ಶಿವಸೇನಾ ಸಂಸದ ಶ್ರೀಕಾಂತ್ ಶಿಂಧೆ ಸೇರಿದಂತೆ ಪ್ರಮುಖ ರಾಜಕೀಯ ಗಣ್ಯರು ಪ್ರಯಾಗ್‌ರಾಜ್ ಮಹಾಕುಂಭದಲ್ಲಿ ಪವಿತ್ರ ಸ್ನಾನ ಮಾಡಿ, ಸಾಧು – ಸಂತರ ಆಶೀರ್ವಾದ ಪಡೆದುಕೊಂಡರು.

ಅಸ್ಸಾಂನಲ್ಲಿ ಉಮ್ರಾಂಗ್ಸೊ ಟಿನಿ – ಕಿಲೋ ಕಲಮತಿ ಅಕ್ರಮ ರ್‍ಯಾಟ್ ಹೋಲ್ ಗಣಿಗಾರಿಕೆ ದುರಂತದಲ್ಲಿ ನಾಪತ್ತೆಯಾಗಿದ್ದ ಐದು ಕಾರ್ಮಿಕರ ಮೃತದೇಹಗಳು ಪತ್ತೆಯಾಗಿವೆ.

# ಕೊಬ್ಬರಿ ಮಿಠಾಯಿ



**ಬೇಕಾಗುವ ಪದಾರ್ಥಗಳು :**
ತೆಂಗಿನಕಾಯಿ ತುರಿ–2 ಬಟ್ಟಲು, ಸಕ್ಕರೆ– 1.1/2 ಬಟ್ಟಲು, ಎಲ್ಲಕ್ಕಿ– ಪುಡಿ, ತುಪ್ಪ 1 ಚಮಚ ಹಾಲು–ಸ್ವಲ್ಪ

**ಮಾಡುವ ವಿಧಾನ :**
ದಪ್ಪತಳದ ಪಾತ್ರೆಗೆ ಕಾಯಿತುರಿ, ಸಕ್ಕರೆ ಮತ್ತು ಏಲಕ್ಕಿ ಪುಡಿ ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ತಟ್ಟೆಗೆ ತುಪ್ಪ ಸವರಿ ಇಟ್ಟುಕೊಳ್ಳಬೇಕು. ಕಾಯಿತುರಿ, ಸಕ್ಕರೆ ಮಿಶ್ರಣವನ್ನು ಒಲೆಯ ಮೇಲಿಟ್ಟು ತಿರುವಬೇಕು. ಸಕ್ಕರೆ ಪೂರ್ತಿಯಾಗಿ ಕರಗುವವರೆಗೂ ಕೈ ಬಿಡದೆ ತಿರುವುತ್ತಿರಬೇಕು ಆಗ ಮಿಶ್ರಣ ತಳದಿಂದ ಮೇಲೆ ಬಿಡುತ್ತದೆ. ತಳದಿಂದ ಬಿಟ್ಟು ಪೂರ್ತಿ ಉಂಡೆಯಾಗುತ್ತದೆ, ತಕ್ಷಣ ತುಪ್ಪ ಸವರಿದ ತಟ್ಟೆಗೆ ಸುರಿದು ಸಮತಟ್ಟಾಗಿ ಹರಡುವುದು. ಮೇಲೆ ಸಮತಟ್ಟಾಗಿ ಬರಲು ಹಾಲಿನಿಂದ ಅದ್ದಿದ ಕೈ ಇಂದ ತಟ್ಟಬಹುದು. ತಕ್ಷಣ ಚಾಕುವಿನಿಂದ ನಮಗೆ ಬೇಕಾದ ಆಕಾರಕ್ಕೆ ಕತ್ತರಿಸಿ ತಣ್ಣಗಾಗಲು ಬಿಡಬೇಕು. ಬಾಯಿಗೆ ಹಾಕಿ ಕೊಂಡರೆ ರುಚಿಕರವಾದ ಮತ್ತು ಕರಗುವಂತ ಕೊಬ್ಬರಿ ಮಿಠಾಯಿ ಸವಿಯಲು ಸಿದ್ಧ.

# ಹೃದಯ ಚೂರಾಗಿದೆ ಎಂದ ನೆತನ್ಯಾಹು



ಇಸ್ರೇಲ್: ಮೃತ ಒತ್ತೆಯಾಳುಗಳ ಪಟ್ಟಿಯನ್ನು ಗುರುವಾರ ಬಿಡುಗಡೆ ಮಾಡಲಾಗುವುದು ಎಂದು ಇಸ್ರೇಲ್ ಹೇಳಿದ್ದು, ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಇಸ್ರೇಲ್‌ನ ನಾಲ್ಕು ಮೃತ ಒತ್ತೆಯಾಳುಗಳ ಪಾರ್ಥಿವ ಶರೀರಗಳನ್ನು ಕರೆತರಲು ತಯಾರಿ ನಡೆಸುತ್ತಿದೆ ಎಂದು ನೆತನ್ಯಾಹು ಹೇಳಿದ್ದಾರೆ. ಇನ್ನು ಇಂತಹ ದುರಂತಗಳು ಮತ್ತೆ ಸಂಭವಿಸದಂತೆ ನೋಡಿಕೊಳ್ಳುವುದಾಗಿ ಹೇಳಿದ ಪ್ರಧಾನಿ, ರಾಷ್ಟ್ರದ ಸಂಕಲ್ಪವನ್ನು ಒತ್ತಿ ಹೇಳಿದರು.

# ಆಸ್ಟ್ರೇಲಿಯಾ ಡಾಲ್ಫಿನ್‌ಗಳು ಸಾವು: ಕಾರಣ ನಿಗೂಢ

ಆಸ್ಟ್ರೇಲಿಯಾ: ಆಸ್ಟ್ರೇಲಿಯಾದ ದಕ್ಷಿಣ ದ್ವೀಪ ತಾಸ್ಮಾನಿಯಾದಲ್ಲಿ ಹೆಚ್ಚು ಜನಸಂಪರ್ಕಕ್ಕೆ ಒಳಗಾಗದ ಸಮುದ್ರ ಕಿನಾರೆಯಲ್ಲಿ 150ಕ್ಕೂ ಹೆಚ್ಚು ಡಾಲ್ಫಿನ್‌ಗಳು ಸಾವನ್ನಪ್ಪಿದ್ದು, ಕಡಲ ಕಿನಾರೆಯಲ್ಲಿ ಅದರ ಕಳೆಬರಗಳು ಕಂಡು ಬಂದಿವೆ. ಈ ನಡುವೆ ಸಾವು ಬದುಕಿನ ನಡುವೆ ಹೋರಾಟ ನಡೆಸಿ, ಗಂಭೀರ ಸ್ಥಿತಿಯಲ್ಲಿ ಪತ್ತೆಯಾಗಿರುವ ಕೆಲವು ಡಾಲ್ಫಿನ್‌ಗಳು ಸಹ ಪತ್ತೆಯಾಗಿದ್ದು, ಅವುಗಳನ್ನು ರಕ್ಷಿಸುವುದು



ಕಷ್ಟವಾಗಿದೆ ಎಂದು ರಾಜ್ಯ ವನ್ಯಜೀವಿ ಅಧಿಕಾರಿ ಬ್ರೆಂಡೋನ್ ಕ್ಲಾರ್ಕ್ ಹೇಳಿದ್ದಾರೆ.

# ವಿಶ್ವಸಂಸ್ಥೆಯಲ್ಲಿ ಭಾರತದ ಪಾಕಿಸ್ತಾನಕ್ಕೆ ತಿರುಗೇಟು



ವಿಶ್ವಸಂಸ್ಥೆ: ಸ್ವತಃ ಭಯೋತ್ಪಾದನೆಯ ಜಾಗತಿಕ ಕೇಂದ್ರಬಿಂದುವಾಗಿರುವ ಪಾಕಿಸ್ತಾನ, ತಾನು ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಮುಂಚೂಣಿಯಲ್ಲಿರುವುದಾಗಿ ಹೇಳಿಕೊಳ್ಳುತ್ತಿರುವುದು ವಿಪರ್ಯಾಸ ಎಂದು ಭಾರತ ಹೇಳಿದೆ. ಪಾಕಿಸ್ತಾನವು ಭಯೋತ್ಪಾದನೆಯ ಜಾಗತಿಕ ಕೇಂದ್ರಬಿಂದುವಾಗಿದೆ. ಯುಎನ್ ಪಟ್ಟಿ ಮಾಡಿದ 20 ಕ್ಕೂ ಹೆಚ್ಚು ಭಯೋತ್ಪಾದಕ ಸಂಘಟನೆಗಳಿಗೆ ಆಶ್ರಯ ನೀಡುತ್ತಿದೆ ಮತ್ತು ಗಡಿಯಾಚೆಗಿನ ಭಯೋತ್ಪಾದನೆಗೆ ಸರ್ಕಾರಿ ಬೆಂಬಲ ನೀಡುತ್ತಿದೆ ಎಂದು ವಿಶ್ವಸಂಸ್ಥೆಯಲ್ಲಿ ಭಾರತದ ಖಾಯಂ ಪ್ರತಿನಿಧಿ ಹರೀಶ್ ಭದ್ರತಾ ಮಂಡಳಿ ಸಭೆಯಲ್ಲಿ ಹೇಳಿದರು.

# ಅಮೆರಿಕದಿಂದ ಇಸ್ರೇಲ್‌ಗೆ ಎಂಕೆ-84 ಬಾಂಬ್ ಪೂರೈಕೆ

ಇಸ್ರೇಲ್: ಅಮೆರಿಕವು ಇತ್ತೀಚೆಗೆ ಎಂಕೆ–84 ಬಾಂಬ್‌ಗಳ ಪೂರೈಕೆಯ ಮೇಲಿನ ತಾತ್ಕಾಲಿಕ ನಿಷೇಧವನ್ನು ತೆಗೆದುಹಾಕಿದ ನಂತರ, ಅಮೆರಿಕವು ಇಸ್ರೇಲ್‌ಗೆ ಭಾರಿ ತೂಕದ ಎಂಕೆ–84 ಬಾಂಬ್‌ಗಳನ್ನು ಕಳುಹಿಸಿಕೊಟ್ಟಿದೆ. ಎಂಕೆ–84 ಇದು 907 ಕೆಜಿ ತೂಕದ ಮಾರ್ಗದರ್ಶಿಯಲ್ಲದ ಬಾಂಬ್ ಆಗಿದ್ದು, ರಿ ಇನ್‌ಫೋರ್ಸ್ಡ್ ಗುರಿಗಳನ್ನು ಭೇದಿಸುವ ಸಾಮರ್ಥ್ಯವನ್ನು ಹೊಂದಿದೆ ಮತ್ತು ತನ್ನ ಬಲವಾದ ಸ್ಫೋಟಕ



ಶಕ್ತಿಯಿಂದ ವ್ಯಾಪಕ ಹಾನಿಯನ್ನುಂಟು ಮಾಡುತ್ತದೆ.


# ಶ್ರೀಲಂಕಾವನ್ನು ಕತ್ತಲಲ್ಲಿ ಕಳೆಯುವಂತೆ ಮಾಡಿದ ಕೋತಿ!



ಶ್ರೀಲಂಕಾ: ಕೋತಿಯಿಂದಾಗಿ ದ್ವೀಪ ರಾಷ್ಟ್ರ ಶ್ರೀಲಂಕಾ ಕೆಲ ಸಮಯ ಕತ್ತಲಿನಲ್ಲಿ ಕಾಲ ಕಳೆಯುವಂತಾಗಿತ್ತು. ಕೋತಿಯೊಂದು ಕೊಲಂಬೊ ಉಪನಗರದ ಗ್ರಿಡ್ ಸ್ಟೇಷನ್‌ನ ಟ್ರಾನ್ಸ್‌ಫಾರ್ಮರ್ ಅನ್ನು ತಾಕಿದ್ದರಿಂದ ಸುಮಾರು 6 ಗಂಟೆಗಳ ಕಾಲ ಶ್ರೀಲಂಕಾದಾದ್ಯಂತ ವಿದ್ಯುತ್ ಕಡಿತಗೊಂಡಿತ್ತು. ಇದರಿಂದ ರಾಷ್ಟ್ರವ್ಯಾಪಿ ಜನಜೀವನ ಅಸ್ತವ್ಯಸ್ತಗೊಂಡಿತ್ತು. ವಿದ್ಯುತ್ ಸ್ಥಾವರ ತಾತ್ಕಲಿಕವಾಗಿ ಸ್ಥಗಿತವಾದ ಕಾರಣ ಶ್ರೀಲಂಕಾದಲ್ಲಿ 90 ನಿಮಿಷಗಳ ವಿದ್ಯುತ್ ಕಡಿತವಾಗಿತ್ತು.

# ಅಮೆರಿಕದ ವೀಸಾ ಡ್ರಾಪ್ ಬಾಕ್ಸ್ ನಿಯಮಗಳಲ್ಲಿ ಬದಲಾವಣೆ

ವೀಸಾ ನವೀಕರಣಕ್ಕೆ ತಂದಿದ್ದ 'ಡ್ರಾಪ್ ಬಾಕ್ಸ್' ನಿಯಮಗಳನ್ನು ಅಮೆರಿಕ ಸರ್ಕಾರ ಬಿಗಿಗೊಳಿಸಿದೆ ಎಂದು ವರದಿಯಾಗಿದೆ. ಇನ್ನು ಮುಂದೆ ಈ ನೀತಿಯ ಅಡಿ ಕಳೆದ 12 ತಿಂಗಳುಗಳಲ್ಲಿ ಅವಧಿ ಮುಗಿದ ವೀಸಾಗಳನ್ನು ಸಂದರ್ಶನವಿಲ್ಲದೇ ನವೀಕರಿಸಬಹುದು. ಮೊದಲು ಈ ಸೌಲಭ್ಯವು 48 ತಿಂಗಳ ಅವಧಿಗೆ ಲಭ್ಯವಿತ್ತು. ಇತ್ತೀಚಿನ ನಿಯಮಗಳನ್ನು ತಕ್ಷಣವೇ ಜಾರಿಗೆ ತರಲಾಗಿದೆ ಎಂಬಂತೆ ಕಂಡು




ಬರುತ್ತಿದೆ. ಆದರೆ ಈ ಬಗ್ಗೆ ಯಾವುದೇ ಅಧಿಕೃತ ಘೋಷಣೆ ಹೊರಬಿದ್ದಿಲ್ಲ.

# ಕರಾಚಿ ಸ್ಟೇಡಿಯಂನಲ್ಲಿ ಹಾರಾಡಿದ ತಿರಂಗ



ನವದೆಹಲಿ: ಐಸಿಸಿ ಚಾಂಪಿಯನ್ಸ್ ಟ್ರೋಫಿ ಪ್ರಾರಂಭವಾಗಿದೆ. 8 ವರ್ಷಗಳ ಬಳಿಕ ನಡೆಯುತ್ತಿರುವ ಪ್ರತಿಷ್ಠಿತ ಟೂರ್ನಿಗೆ ಪಾಕಿಸ್ತಾನ ಆತಿಥ್ಯ ವಹಿಸಿದೆ. ಇಂದು ಮೊದಲ ಪಂದ್ಯದಲ್ಲಿ ಪಾಕಿಸ್ತಾನ ಮತ್ತು ನ್ಯೂಜಿಲೆಂಡ್ ತಂಡಗಳು ಮುಖಾಮುಖಿಯಾಗಿವೆ. ಕರಾಚಿ, ರಾವಲ್ಪಿಂಡಿ ಮತ್ತು ಲಾಹೋರ್ ಮೈದಾನಗಳಲ್ಲಿ ಭಾರತದ ಧ್ವಜವನ್ನು ಹೊರತುಪಡಿಸಿ ಉಳಿದೆಲ್ಲಾ ದೇಶಗಳ ಧ್ವಜವನ್ನು ಪ್ರದರ್ಶಿಸಿತ್ತು. ನಂತರ ಇದೀಗ ಕರಾಚಿ ಮೈದಾನದಲ್ಲಿ ತಿರಂಗ ಧ್ವಜವನ್ನು ಪ್ರದರ್ಶಿಸಿದೆ.

# ಮಂಗಳೂರಲ್ಲಿ ಇಂಡಿಯಾ ಪ್ಯಾಡಲ್ ಫೆಸ್ಟಿವಲ್‌ನ 2ನೇ ಆವೃತ್ತಿ

ಮಂಗಳೂರು: ದೇಶದ ಏಕೈಕ ಅಂತಾರಾಷ್ಟ್ರೀಯ ಸ್ಟ್ಯಾಂಡ್–ಅಪ್ ಪ್ಯಾಡಲ್ (SUP) ಕಾರ್ಯಕ್ರಮವಾದ ಇಂಡಿಯಾ ಪ್ಯಾಡಲ್ ಫೆಸ್ಟಿವಲ್ ಮಾರ್ಚ್ 7ರಿಂದ 9ರವರೆಗೆ ಮಂಗಳೂರಿನ ಸಸಿಹಿತ್ಲು ಬೀಚ್‌ನಲ್ಲಿ ನಡೆಯಲಿದೆ. ಇದು ಎರಡನೇ ಆವೃತ್ತಿಯ ಪ್ಯಾಡಲ್ ಫೆಸ್ಟಿವಲ್ ಆಗಿದೆ. ಸರ್ಫಿಂಗ್ ಸ್ವಾಮಿ ಫೌಂಡೇಶನ್ ಆಯೋಜಿಸುವ ಕರ್ನಾಟಕ ಪ್ರವಾಸೋದ್ಯಮದಿಂದ ಪ್ರಸ್ತುತಪಡಿಸಲಾದ ಈ ಉತ್ಸವದಲ್ಲಿ ಅಂತಾರಾಷ್ಟ್ರೀಯ ಕ್ರೀಡಾಪಟುಗಳು, ಪ್ರಾದೇಶಿಕ



ಸ್ಪರ್ಧಿಗಳು ಮತ್ತು ಜಲಕ್ರೀಡಾ ಉತ್ಸಾಹಿಗಳು ಭಾಗವಹಿಸಲಿದ್ದಾರೆ.

# ಮತ್ತೊಮ್ಮೆ ಫ್ಯಾನ್ಸ್ ಹೃದಯ ಗೆದ್ದ RCB



ಬೆಂಗಳೂರು: ಮಹಿಳಾ ಪ್ರೀಮಿಯರ್ ಲೀಗ್ (WPL)ನ ಮೂರನೇ ಆವೃತ್ತಿ ಆರಂಭವಾಗುತ್ತಿದ್ದಂತೆ ಹಾಲಿ ಚಾಂಪಿಯನ್ಸ್ ರಾಯಲ್ ಚಾಲೆಂಜರ್ಸ್ ಬೆಂಗಳೂರು (RCB) ಫ್ರಾಂಚೈಸಿ ತನ್ನ ಯಶಸ್ಸಿನ ಭಾಗವೆನಿಸಿರುವ ಅಭಿಮಾನಿಗಳಿಗೆ ವಿಶೇಷ ಟ್ರಿಬ್ಯೂಟ್ ಸಲ್ಲಿಸಿದೆ. ಫ್ರಾಂಚೈಸಿಯ ಹೃದಯ ಮತ್ತು ಆತ್ಮವೆಂದು ಗುರುತಿಸಿಕೊಂಡಿರುವ ಅಭಿಮಾನಿಗಳ '12th ಮ್ಯಾನ್ ಆರ್ಮಿ'ಗೆ ಗೌರವ ಸೂಚಕವಾಗಿ ಕೆಲ ಆಯ್ದ ಕ್ಷಣಗಳನ್ನ ಫ್ರಾಂಚೈಸಿಯು ಹಂಚಿಕೊಂಡಿದೆ. ಆ ಪ್ರಮುಖ ಕ್ಷಣಗಳು ಈ ಬಾರಿ ತಂಡದ ಆಟಗಾರರು ಸಂಚರಿಸಲಿರುವ ಬಸ್‌ನ ಮೇಲೆ ಕಾಣಿಸಿಕೊಳ್ಳಲಿವೆ.

# ನೀರಾವರಿ ಯೋಜನೆಗಳ ಒಪ್ಪಿಗೆಗೆ ಪ್ರಸ್ತಾವನೆ – ಡಿಸಿಎಂ ಡಿಕೆಶಿ



ಬೆಂಗಳೂರು: ಮೇಕೆದಾಟು, ಮಹದಾಯಿ ಮತ್ತು ಕೃಷ್ಣಾ ಮೇಲ್ದಂಡೆ ನೀರಾವರಿ ಯೋಜನೆಗಳ ಅನುಷ್ಠಾನದ ಬಗ್ಗೆ ಚರ್ಚಿಸಲು ಇದೇ 25 ರಂದು ಕೇಂದ್ರ ಜಲಶಕ್ತಿ ಸಚಿವರನ್ನು ಜಲ ಸಂಪನ್ಮೂಲ ಸಚಿವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭೇಟಿಯಾಗಲಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ ರಾಜ್ಯದಲ್ಲಿ ನನೆಗುದಿಗೆ ಬಿದ್ದಿರುವ ನೀರಾವರಿ ಯೋಜನೆಗಳಿಗೆ ಕೇಂದ್ರ ಸರಕಾರದ ಒಪ್ಪಿಗೆಗಾಗಿ ಮತ್ತು ಕೇಂದ್ರ ಸರಕಾರ ಘೋಷಣೆ ಮಾಡಿರುವ ನೀರಾವರಿ ಯೋಜನೆಗಳಿಗೆ ಅನುದಾನ ನೀಡುವಂತೆ ಪ್ರಸ್ತಾವನೆ ಸಲ್ಲಿಸಲಾಗುತ್ತದೆ ಎಂದು ಜಲ ಸಂಪನ್ಮೂಲ ಸಚಿವ ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ತಿಳಿಸಿದ್ದಾರೆ.

# ಕಾರವಾರ ನೌಕಾನೆಲೆಯಲ್ಲಿ ಮತ್ತಷ್ಟು ಬಿಗಿಗೊಂಡ ತಪಾಸಣೆ !


ಕಾರವಾರ: ಭಾರತೀಯ ನೌಕಾಪಡೆಯ ಗುಪ್ತ ಮಾಹಿತಿಯನ್ನು ಪಾಕಿಸ್ತಾನದ ಬೇಹುಗಾರರಿಗೆ ನೀಡುತ್ತಿದ್ದ ಆರೋಪದ ಮೇರೆಗೆ ರಾಷ್ಟ್ರೀಯ ತನಿಖಾ ದಳ (ಎನ್‌ಐಎ) ಒಟ್ಟು ಮೂವರನ್ನು ಬಂಧಿಸಿದೆ. ಈ ಘಟನೆ ಬಳಿಕ ಕಾರವಾರ ಕದಂಬ ನೌಕಾನೆಲೆಯಲ್ಲಿ ಭದ್ರತೆ ಬಿಗಿಗೊಳಿಸಿದ್ದು ನೌಕಾನೆಲೆ ಪ್ರವೇಶಿಸುವವರ ತೀವ್ರ




ತಪಾಸಣೆಗೊಳಿಸಿ ಅವರ ಮೇಲೆ ಹದ್ದಿನ ಕಣ್ಣಿಡುತ್ತಿರುವ ಬಗ್ಗೆ ಮೂಲಗಳಿಂದ ಮಾಹಿತಿ ಲಭ್ಯವಾಗಿದೆ. ಇದರೊಂದಿಗೆ ಈ ಬೇಹುಗಾರಿಕೆ ಮೂಲಕ ನೌಕಾನೆಲೆಯ ಅತಿಸೂಕ್ಷ್ಮ ಮಾಹಿತಿ ನೀಡುತ್ತಿದ್ದ ಪ್ರಕರಣದಲ್ಲಿ ಒಟ್ಟು 8 ಮಂದಿ ಬಂಧನ ಮಾಡಿರುವ ಬಗ್ಗೆ ಎನ್‌ಐಎ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿದೆ.


# ಸರ್ವೇ ಇಲಾಖೆಯಲ್ಲಿ ಸಂಪೂರ್ಣ ತಂತ್ರಜ್ಞಾನ ಬಳಕೆ

ಬೆಂಗಳೂರು: "ಆಧುನಿಕ ಕಂಪ್ಯೂಟರ್ ಜಗತ್ತಿನಲ್ಲೂ ಸಹ ಸರ್ವೇ ಕೆಲಸವನ್ನು ತಾಂತ್ರಿಕಗೊಳಿಸದೆ ಜನರ ಮೇಲೆ ಹೊರೆ ಹಾಕುವುದು ಅಮಾನವೀಯ ಮತ್ತು ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾದ ನಡವಳಿಕೆ" ಎಂದು ಸಚಿವ ಕೃಷ್ಣ ಬೈರೇಗೌಡ ಅಭಿಪ್ರಾಯಪಟ್ಟಿದ್ದಾರೆ. "ಸರ್ವೇ ಕೆಲಸವನ್ನು ಹಿಂದಿನಿಂದಲೂ ಚೈನ್ ಹಿಡಿದೇ ಭೂಮಿಯನ್ನು ಅಳೆಯುವ ಸಂಪ್ರದಾಯ ಚಾಲ್ತಿಯಲ್ಲಿದೆ. ಸರ್ವೇ ಮಾಡಲು ಕನಿಷ್ಠ 70 ನಿಮಿಷ, ಅದನ್ನು ನಕ್ಷೆ ಮಾಡಲು 3 ಗಂಟೆ ಸಮಯ ವ್ಯರ್ಥವಾಗುತ್ತಿತ್ತು. ಆದರೆ, ಆಧುನಿಕ ತಂತ್ರಜ್ಞಾನ ಆಧಾರಿತ ರೋವರ್ ಈ ಕೆಲಸವನ್ನು ಕೇವಲ 10 ನಿಮಿಷಕ್ಕೆ ಮುಗಿಸಲಿದೆ" ಎಂದರು.



# ಸೆಟ್ ಟಾಪ್ ಬಾಕ್ಸ್‌ಗಳಿಗೆ ವ್ಯಾಟ್ ನ್ಯಾಯಸಮ್ಮತ : ಹೈಕೋರ್ಟ್

ಬೆಂಗಳೂರು : ಸೆಟ್ ಟಾಪ್ ಬಾಕ್ಸ್‌ಗಳ (ಎಸ್‌ಟಿಬಿ) ಮೇಲೆ ಸರ್ಕಾರ ಮೌಲ್ಯವರ್ಧಿತ ತೆರಿಗೆ (ವ್ಯಾಟ್) ವಿಧಿಸುವುದು ನ್ಯಾಯಸಮ್ಮತವಾಗಿದೆ ಎಂದು ಹೈಕೋರ್ಟ್ ತಿಳಿಸಿದೆ. ಒಂದೇ ವ್ಯವಹಾರಕ್ಕೆ ಹಲವು ಮುಖಗಳಿರುತ್ತವೆ. ವಿವಿದ ತೆರಿಗೆಗಳನ್ನು ಕೇಂದ್ರ–ರಾಜ್ಯ ಮಾರಾಟದ ಅಡಿಯಲ್ಲಿ ವಿಧಿಸಲಾಗಿರುತ್ತದೆ. ಒಂದೇ



ವ್ಯವಹಾರದಲ್ಲಿ ಇವೆರಡೂ ಒಳಗೊಂಡಿರಲು ಸಾಧ್ಯ. ಎಸ್‌ಟಿಬಿ ಕೊಡುವಾಗ ದುಡ್ಡು ಪಡೆಯಲಾಗುತ್ತಿದೆ. ಹೀಗಾಗಿ ಅದು ಮಾರಾಟವೇ ಆಗುತ್ತದೆ. ಅಂದಮೇಲೆ, ರಾಜ್ಯ ಸರ್ಕಾರಕ್ಕೆ ಇದರ ಮೇಲೆ ತೆರಿಗೆ ವಿಧಿಸಲು ಸಂವಿಧಾನದಲ್ಲಿ ಮುಕ್ತ ಅವಕಾಶವಿದೆ ಎಂದು ಪೀಠ ಹೇಳಿದೆ.

# ಮಲಪ್ರಭಾ ಜಲಾಶಯದಿಂದ ಕಾಲುವೆಗಳಿಗೆ ನೀರು : ಲಕ್ಷ್ಮೀ ಹೆಬ್ಬಾಳ್ಕರ್ ಆದೇಶ



ಬೆಳಗಾವಿ: ಮಲಪ್ರಭಾ ಜಲಾಶಯದಿಂದ ಕಾಲುವೆಗಳಿಗೆ ಹರಿಬಿಡಲಾಗಿರುವ ನೀರನ್ನು ಫೆಬ್ರವರಿ 15ರಿಂದ ಸ್ಥಗಿತಗೊಳಿಸುವ ನಿರ್ಧಾರವನ್ನು ರೈತರ ಬೇಡಿಕೆ ಹಿನ್ನೆಲೆಯಲ್ಲಿ ಕೈಬಿಟ್ಟು, ಮಾ.1ರವರೆಗೂ ನೀರು ಬಿಡುವಂತೆ ಮಲಪ್ರಭಾ ಯೋಜನಾ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರೂ ಆಗಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಆದೇಶಿಸಿದ್ದಾರೆ. ಪ್ರಸ್ತುತ ಎರಡೂ ಹಂಗಾಮುಗಳು ಮುಗಿದಿದ್ದರೂ ಸಹ, ನರಗುಂದ ಹಾಗೂ ಬಾದಾಮಿ ಶಾಸಕರು ಹಾಗೂ ರೈತ ಮುಖಂಡರು ನೀರನ್ನು ಕಾಲುವೆಗಳಿಗೆ ಮಾರ್ಚ್ 15ರವರೆಗೆ ಮುಂದುವರೆಸುವಂತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರಲ್ಲಿ ಮನವಿ ಮಾಡಿದ್ದಾರೆ.

# ಕುಡಿಯುವ ನೀರಿನ ಅನ್ಯ ಬಳಕೆ ನಿಷೇಧಿಸಿ ಜಲಮಂಡಳಿ ಆದೇಶ


ಬೆಂಗಳೂರು; ಬೇಸಿಗೆ ಕಾಲದಲ್ಲಿ ಎದುರಾಗುವ ಕುಡಿಯುವ ನೀರಿನ ಕೊರತೆ ನಿಭಾಯಿಸಲು ಬೆಂಗಳೂರು ಜಲಮಂಡಳಿ ಈಗಿನಿಂದಲೇ ನಿಯಂತ್ರಣ ಕ್ರಮಗಳನ್ನು ಅನುಷ್ಠಾನಕ್ಕೆ ತರತೊಡಗಿದೆ. ಬೆಂಗಳೂರು ಮಹಾನಗರದಲ್ಲಿ ಕುಡಿಯುವ ನೀರನ್ನು ಅನ್ಯ ಉದ್ದೇಶಗಳಿಗೆ ಬಳಸುವುದನ್ನು ನಿಷೇಧಿಸಿ ಬಿಡಬ್ಲ್ಯುಎಸ್‌ಎಸ್



ಬಿ ಆದೇಶ ಹೊರಡಿಸಿದೆ. ನಗರದಲ್ಲಿ ಪ್ರತಿದಿನ ಉಷ್ಣಾಂಶ ಹೆಚ್ಚಾಗುತ್ತಿದೆ. ಇತ್ತೀಚೆಗಿನ ದಿನಗಳಲ್ಲಿ ಮಳೆಯ ಪ್ರಮಾಣ ಕಡಿಮೆಯಾಗಿ ಅಂತರ್ಜಲ ಕುಸಿದಿದೆ. ಇಂತಹ ಸಂದರ್ಭದಲ್ಲಿ ಕುಡಿಯುವ ನೀರು ವ್ಯರ್ಥ ಮಾಡುವುದನ್ನು ತಡೆಗಟ್ಟುವುದು ಅವಶ್ಯವಾಗಿದೆ ಎಂದು ಬಿಡಬ್ಲ್ಯುಎಸ್‌ಎಸ್‌ಬಿ ತಿಳಿಸಿದೆ.

# ಪತ್ರಕರ್ತ ಮಜೀದ್ ಬಂಧನದ ಆದೇಶ ರದ್ದುಪಡಿಸಿದ ಹೈಕೋರ್ಟ್

ಶ್ರೀನಗರ: ಸಾರ್ವಜನಿಕ ಸುರಕ್ಷತಾ ಕಾಯ್ದೆ ಅಡಿಯಲ್ಲಿ ಪತ್ರಕರ್ತ ಮಜೀದ್ ಹೈದರಿ ಅವರ ಬಂಧನ ಆದೇಶವನ್ನು ಜಮ್ಮು ಮತ್ತು ಕಾಶ್ಮೀರ ಮತ್ತು ಲಡಾಖ್ ಹೈಕೋರ್ಟ್ ರದ್ದುಗೊಳಿಸಿದೆ. ನ್ಯಾಯಮೂರ್ತಿ ವಿ.ಕೆ.ಚಟರ್ಜಿ ಅವರು ಪಿಎಸ್‌ಐ ಅಡಿಯಲ್ಲಿ ಹೈದರಿ ಬಂಧನದ ಆದೇಶವನ್ನು ರದ್ದುಗೊಳಿಸಿದ್ದಾರೆ ಎಂದು ಅರ್ಜಿದಾರರ ವಕೀಲರು ಸುದ್ದಿಗಾರರಿಗೆ ತಿಳಿಸಿದರು. ಸುಲಿಗೆ ಮತ್ತು ಮಾನಹಾನಿ ಆರೋಪದ ಮೇಲೆ ಮಜೀದ್ ಹೈದರಿಯನ್ನು ಬಂಧಿಸಿ ಪಿಎಸ್‌ಐ ಅಡಿಯಲ್ಲಿ ಸೆಪ್ಟೆಂಬರ್ 2023ರಲ್ಲಿ ಪ್ರಕರಣ ದಾಖಲಿಸಲಾಗಿತ್ತು.




# 'ಛಾವಾ' ಚಿತ್ರ ಮೆಚ್ಚಿದ ಮಹಾರಾಷ್ಟ್ರ ಸಿಎಂ ಫಡ್ನವಿಸ್

ಮಹಾರಾಷ್ಟ್ರ: ಛತ್ರಪತಿ ಸಂಭಾಜಿ ಮಹಾರಾಜರ ಜೀವನವನ್ನಾಧರಿಸಿದ "ಛಾವಾ" ಚಿತ್ರವನ್ನು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರು ಶ್ಲಾಘಿಸಿದ್ದಾರೆ. ಇದೊಂದು ಐತಿಹಾಸಿಕ ಚಿತ್ರ. ಸತ್ಯ ಸಂಗತಿಗಳನ್ನು ತಿರುಚಲಾಗಿಲ್ಲ ಎಂದು ಹೇಳಿದ್ದಾರೆ.



"ಮರಾಠಿಗೆ ಮೊದಲು ಶಾಸ್ತ್ರೀಯ ಭಾಷೆಯ ಸ್ಥಾನಮಾನ ನೀಡಿದವರು ಛತ್ರಪತಿ ಶಿವಾಜಿ ಮಹಾರಾಜರು. ಛತ್ರಪತಿ ಸಂಭಾಜಿ ಮಹಾರಾಜ್ ಅವರ ಶೌರ್ಯ, ಧೈರ್ಯ ಮತ್ತು ಜ್ಞಾನ ಅಪಾರವಾಗಿತ್ತು, ನಾವು ಅವರ ಸೈನಿಕರಂತೆ ಕೆಲಸ ಮಾಡುತ್ತಿದ್ದೇವೆ ಎಂದು ತಿಳಿಸಿದರು.


# ಅರುಣಾಚಲ ಪ್ರದೇಶದಲ್ಲಿ ಕರಗುತಿವೆ ಹಿಮನದಿಗಳು!



ಗುವಾಹಟಿ: ಕಳೆದ ಮೂರು ದಶಕಗಳಲ್ಲಿ ಅರುಣಾಚಲ ಪ್ರದೇಶದಲ್ಲಿ ದೊಡ್ಡ ಪ್ರಮಾಣದಲ್ಲಿ ಹಿಮನದಿಗಳು ಕರಗಿ ಹೋಗಿವೆ ಎಂದು ನಾಗಾಲ್ಯಾಂಡ್ ವಿಶ್ವವಿದ್ಯಾಲಯ ಮತ್ತು ಗುವಾಹಟಿಯ ಕಾಟನ್ ವಿಶ್ವವಿದ್ಯಾಲಯದ ಸಂಶೋಧಕರು ಪತ್ತೆ ಮಾಡಿದ್ದಾರೆ ಎಂದು ತಜ್ಞರು ತಿಳಿಸಿದ್ದಾರೆ. ಸಾಮಾನ್ಯವಾಗಿ "ಮೂರನೇ ಧ್ರುವ" ಎಂದು ಕರೆಯಲ್ಪಡುವ ಹಿಮಾಲಯವು ಧ್ರುವ ಪ್ರದೇಶಗಳನ್ನು ಹೊರತುಪಡಿಸಿದರೆ ಹಿಮನದಿಗಳ ಅತಿದೊಡ್ಡ ಸಾಂದ್ರತೆಯನ್ನು ಹೊಂದಿದೆ. ಈ ಹಿಮನದಿಗಳು ಕೆಳಭಾಗದಲ್ಲಿ ವಾಸಿಸುವ 1.3 ಬಿಲಿಯನ್‌ಗಿಂತ ಹೆಚ್ಚು ಜನರಿಗೆ ಶುದ್ಧ ನೀರಿನ ಮೂಲವಾಗಿವೆ.

# ಮುಖ್ಯ ಚುನಾವಣಾ ಆಯುಕ್ತರ ನೇಮಕ ಪ್ರಶ್ನಿಸಿ ಸುಪ್ರೀಂಗೆ ಅರ್ಜಿ

ನವದೆಹಲಿ: 2023ರ ಕಾನೂನಿನಡಿ ಮುಖ್ಯ ಚುನಾವಣಾ ಆಯುಕ್ತರು ಮತ್ತು ಚುನಾವಣಾ ಆಯುಕ್ತರ ನೇಮಕ ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳನ್ನು ಆದ್ಯತೆಯ ಮೇಲೆ ವಿಚಾರಣೆಗೆ ಕೈಗೆತ್ತಿಕೊಳ್ಳುವುದಾಗಿ ಸುಪ್ರೀಂಕೋರ್ಟ್ ತಿಳಿಸಿದೆ. ಈ ವಿಚಾರದ ತುರ್ತು ಪರಿಗಣನೆಯ



ಅಗತ್ಯ ಇರುವುದರಿಂದ ವಿಷಯವನ್ನು ಬೇಗನೇ ಕೈಗೆತ್ತಿಕೊಳ್ಳುವಂತೆ ಪೀಠಕ್ಕೆ ಮನವಿ ಮಾಡಿದರು. 2023ರ ಕಾನೂನಿನ ಪ್ರಕಾರ ಸರ್ಕಾರವು ಸಿಇಸಿ ಮತ್ತು ಇಸಿ ನೇಮಕ ಮಾಡಿದೆ. ಇದು ಸಂವಿಧಾನ ಪೀಠದ ಅಭಿಪ್ರಾಯಕ್ಕೆ ವಿರುದ್ಧವಾಗಿದೆ ನ್ಯಾ. ಪ್ರಶಾಂತ್ ಭೂಷಣ್ ಹೇಳಿದರು.

# ಅಜ್ಮೇರದಲ್ಲಿ ಅಖಿಲ ಭಾರತ ಕಿನ್ನರ್ ಮಹಾ ಸಮ್ಮೇಳನ

ರಾಜಸ್ಥಾನ್: ಧಾರ್ಮಿಕ ಕ್ಷೇತ್ರಗಳಲ್ಲಿ ಒಂದಾಗಿರುವ ಅಜ್ಮೀರ್‌ದಲ್ಲಿ ನಡೆಯುತ್ತಿರುವ ಅಖಿಲ ಭಾರತ ಕಿನ್ನರ್ ಮಹಾ ಸಮ್ಮೇಳನದಲ್ಲಿ ದೇಶದ ವಿವಿಧ ರಾಜ್ಯಗಳ ತೃತೀಯ ಲಿಂಗಿ ಸಮುದಾಯದ ಜನರು ಒಟ್ಟಾಗಿದ್ದಾರೆ. ಅಜ್ಮೇರದ ಕಿನ್ನರ್ ಸಮುದಾಯವೂ ಈ ಮಹಾ ಸಮ್ಮೇಳನವನ್ನು ಆಯೋಜಿಸಿದ್ದು, ಹೊರಗಿನ ಅನೇಕ ಅತಿಥಿಗಳನ್ನು ಆತ್ಮೀಯವಾಗಿ ಸ್ವಾಗತಿಸಿದೆ. ಮಹಾ ಸಮ್ಮೇಳನಕ್ಕಾಗಿ ಅತ್ಯುತ್ತಮ ಸಿದ್ಧತೆ ನಡೆಸಲಾಗಿದ್ದು, ಇದೇ ವೇಳೆ ಭದ್ರತೆಗೆ ಬೌನ್ಸರ್‌ಗಳನ್ನು ನಿಯೋಜಿಸಲಾಗಿದೆ. ಕಿನ್ನರ್ ಸಮುದಾಯದ ಖಿಚಡಿ ತುಳೈ ಆಚರಣೆಯೊಂದಿಗೆ ಮಹಾ ಸಮ್ಮೇಳನ ಅಧಿಕೃತವಾಗಿ ಆರಂಭವಾಗಿದೆ.



# ಹಿಮಾಲಯ ಕಣಿವೆಯಲ್ಲಿ ಪ್ರವಾಸೋದ್ಯಮಕ್ಕೆ ಉತ್ತೇಜನ

ಉತ್ತರಾಖಂಡ: ಪ್ರಧಾನಿ ನರೇಂದ್ರ ಮೋದಿ ಫೆ.27ರಂದು ಉತ್ತರಕಾಶಿಯ ಗಂಗೋತ್ರಿ ಧಾಮದ ಮುಖ್ಬಾಗೆ ಭೇಟಿ ನೀಡ ಲಿದ್ದಾರೆ. ಈ ವೇಳೆ ಜದುಂಗ್–ಜಂಕತ್ತಲ್ ಮತ್ತು ನೀಲಪಾನಿ–ಮುಲಿಂಗ್ನಾ ಪಾಸ್ ಟ್ರ್ಯಾಕ್‌ಗಳನ್ನು ಉದ್ಘಾಟಿಸಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರಧಾನಿ ಎರಡು ಪಾಸ್ ಟ್ರ್ಯಾಕ್‌ಗ



ಳನ್ನು ಉದ್ಘಾಟಿಸಲಿದ್ದು, ಇದು ನೆಲಂಗ್ ಮತ್ತು ಜದುಂಗ್ ಕಣಿವೆಗಳಲ್ಲಿ ಪ್ರವಾಸೋದ್ಯಮಕ್ಕೆ ಹೊಸ ಆಯಾಮ ನೀಡಲಿದೆ, 1962ರ ಭಾರತ–ಚೀನಾ ಯುದ್ಧದ ಬಳಿಕ ನೆಲಂಗ್ ಮತ್ತು ಜದುಂಗ್ ಕಣಿವೆ ಪ್ರದೇಶಗಳನ್ನು ಕಂಟೋನ್ಮೆಂಟ್ ಆಗಿ ಪರಿವರ್ತಿಸಿ, ಸ್ಥಳೀಯರು ಮತ್ತು ಪ್ರವಾಸಿಗರನ್ನು ನಿರ್ಬಂಧಿಸಲಾಯಿತು.




## ದುಬೈನಲ್ಲಿ "ವೀರ ಕಂಬಳ" ಚಿತ್ರದ ಚಿತ್ರೀಕರಣ..



ಕನ್ನಡ ಚಿತ್ರರಂಗಕ್ಕೆ ಸಾಕಷ್ಟು ಸದಭಿರುಚಿಯ ಚಿತ್ರಗಳನ್ನು ನೀಡಿರುವ ಹಿರಿಯ ನಿರ್ದೇಶಕ ಎಸ್ ವಿ ರಾಜೇಂದ್ರ ಸಿಂಗ್ ಬಾಬು ಅವರ ನಿರ್ದೇಶನದಲ್ಲಿ ಹಾಗೂ ಅರುಣ್ ರೈ ತೊಡರ್ ಅವರ ನಿರ್ಮಾಣದಲ್ಲಿ ಕನ್ನಡ ಹಾಗೂ ತುಳು ಭಾಷೆಗಳಲ್ಲಿ ಮೂಡಿಬರುತ್ತಿರುವ "ವೀರ ಕಂಬಳ" ಚಿತ್ರಕ್ಕೆ ದೂರದ ದುಬೈನಲ್ಲೂ ಚಿತ್ರೀಕರಣವಾಗಿದೆ. ಇತ್ತೀಚೆಗೆ ದುಬೈನಲ್ಲಿ ಚಿತ್ರೀಕರಣ ಮುಗಿಸಿದ ಚಿತ್ರತಂಡ ಬೆಂಗಳೂರಿಗೆ ವಾಪಸಾಗಿದೆ. ನಟ ಆದಿತ್ಯ, ನಿರ್ಮಾಪಕ ಅರುಣ್ ರೈ ತೊಡರ್, ಶೋಭ್ ರಾಜ್ ಮುಂತಾದವರು ದುಬೈ ಭಾಗದ ಚಿತ್ರೀಕರಣದಲ್ಲಿ ಪಾಲ್ಗೊಂಡಿದ್ದರು."ಕಂಬಳ" ದಕ್ಷಿಣ ಕನ್ನಡದ ಪ್ರಸಿದ್ಧ ಕ್ರೀಡೆ. ಇದನ್ನೇ ಮುಖ್ಯವಾಗಿಟ್ಟುಕೊಂಡು "ವೀರ ಕಂಬಳ" ಚಿತ್ರ ತಯಾರಾಗುತ್ತಿದೆ. ಕನ್ನಡದಲ್ಲಿ "ವೀರ ಕಂಬಳ" ಎಂಬ ಹೆಸರಿನಿಂದ ಹಾಗೂ ತುಳುವಿನಲ್ಲಿ "ಬಿರ್ದುದ ಕಂಬಳ" ಎಂಬ ಹೆಸರಿನಲ್ಲಿ ಮೂಡಿ ಬರುತ್ತಿದೆ.

## ಸತ್ಯ ಘಟನೆಯ ಎಳೆ ಶಭಾಷ್ ಬಡ್ಡಿಮಗ್ನೆ..



ಡಾ.ರಾಜ್‌ಕುಮಾರ್ ಚಿತ್ರದಲ್ಲಿ ಬಳಸುತ್ತಿದ್ದ 'ಶಭಾಷ್ ಬಡ್ಡಿಮಗ್ನೆ' ಈಗ ಸಿನಿಮಾದ ಶೀರ್ಷಿಕೆಯಾಗಿದೆ. ಪ್ರಚಾರದ ಸಲುವಾಗಿ ಟ್ರೇಲರ್ ಹಾಗೂ ಹಾಡುಗಳ ಬಿಡುಗಡೆ ಸಮಾರಂಭವು ಕಲಾವಿದರ ಸಂಘದಲ್ಲಿ ಅದ್ದೂರಿಯಾಗಿ ನಡೆಯಿತು. ಕಿಶನ್ ಪ್ರೊಡಕ್ಷನ್ ಅಡಿಯಲ್ಲಿ ಚೈತ್ರಾಪ್ರಕಾಶ್ ಬಂಡವಾಳ ಹೂಡಿದ್ದಾರೆ. ಬರವಣಿಗೆ, ಚಿತ್ರಕಥೆ, ಸಂಭಾಷಣೆ ಬರೆದಿರುವ ಬಿ.ಎಸ್.ರಾಜಶೇಖರ್ ಆಕ್ಷನ್ ಕಟ್ ಹೇಳಿದ್ದಾರೆ. ಸಂಗೀತ ಸಂತೋಷ್ ಜೋಶ್ವ, ಸಹ ನಿರ್ದೇಶನ ಎಸ್. ಜೆ. ಸಂಜಯ್, ಸಂಕಲನ ಶ್ರೀನಿವಾಸ್ ಕಲಾಲ್, ನೃತ್ಯ ಧನಂಜಯ್, ಸಾಹಸ ಚಿನ್ನಯ್ಯ ಅವರದ್ದಾಗಿದೆ. ಪ್ರಮೋದ್‌ಶೆಟ್ಟಿ ನಾಯಕನಾದರೆ ಆದ್ಯ ಪ್ರಿಯಾ ನಾಯಕಿ. ರೀಲ್ಸ್ ಮಾಡುತ್ತಾ ಹೆಸರು ಮಾಡಿರುವ ಹಾಸನ ಮೂಲದ ಸಾಮ್ರಾಟ್ ಶೆಟ್ಟಿ ಮೊದಲ ಬಾರಿ ತೆರೆ ಹಂಚಿಕೊಂಡಿದ್ದಾರೆ.

## ಎಲ್ಲೋ ಜೋಗಪ್ಪ ನಿನ್ನರಮನೆ ಫೆ.21ತೆರೆಗೆ..



ಸ್ಯಾಂಡಲ್‌ವುಡ್ ಅಂಗಳದಲ್ಲೀಗ ಜೋಗಪ್ಪನ ಸದ್ದು ಜೋರಾಗಿದೆ. ಅನೇಕ ಹಿಟ್ ಧಾರಾವಾಹಿಗಳನ್ನು ನಿರ್ದೇಶಿಸಿ ಸೈ ಎನಿಸಿಕೊಂಡಿರುವ ನಿರ್ದೇಶಕ ಹಯದವನ ಚೊಚ್ಚಲ ಪ್ರಯತ್ನದ ಎಲ್ಲೋ ಜೋಗಪ್ಪ ನಿನ್ನರಮನೆ ಪ್ರೇಕ್ಷಕರ ಎದುರು ಬರಲು ಕೆಲ ದಿನಗಳಷ್ಟೇ ಬಾಕಿ ಇದೆ. ಬಿಡುಗಡೆಗೆ ಸಜ್ಜಾಗಿರುವ ಚಿತ್ರತಂಡ ಭರದಿಂದ ಪ್ರಚಾರ ಕೂಡ ನಡೆಸುತ್ತಿದೆ. ಇದೇ ತಿಂಗಳ 21ಕ್ಕೆ ತೆರೆಗೆ ಬರುತ್ತಿದೆ. ಕಂಬ್ಳಿಹುಳ ಖ್ಯಾತಿಯ ಅಂಜನ್ ನಾಗೇಂದ್ರ ಈ ಚಿತ್ರದ ನಾಯಕನಾಗಿ ನಟಿಸಿದ್ದಾರೆ. ವೆನ್ಯಾ ರೈ ನಾಯಕಿಯಾಗಿದ್ದಾರೆ. ಸಂಜನಾ ದಾಸ್ ಪ್ರಧಾನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಇನ್ನುಳಿದಂತೆ ಶರತ್ ಲೋಹಿತಾಶ್ವ, ದಾನಪ್ಪ, ದಿನೇಶ್ ಮಂಗಳೂರು, ಸ್ವಾತಿ ಬಿರಾದಾರ್, ಲಕ್ಷ್ಮಿ, ನಾಡ ಗೌಡ, ರೇಖಾ ರಾವ್, ಇಳಾ ವಿಟ್ಲ ಮುಂತಾದವರು ತಾರಾ ಬಳಗದಲ್ಲಿದ್ದಾರೆ. ಹಯವದನರ ಮೊದಲ ನಿರ್ದೇಶನದ ಮೊದಲ ಚಿತ್ರ ಇದಾಗಿದೆ.


## ಧ್ರುವ ಸರ್ಜಾರಿಂದ "ಚೇಸರ್" ಟೀಸರ್..

ಹೊಸಬರ ಹೊಸಪ್ರಯತ್ನಕ್ಕೆ ಆಕ್ಷನ್ ಪ್ರಿನ್ಸ್ ಧ್ರುವ ಸರ್ಜಾ ಸದಾ ಪ್ರೋತ್ಸಾಹ ನೀಡುತ್ತಾ ಬರುತ್ತಿದ್ದಾರೆ. ಇತ್ತೀಚೆಗೆ ಮಾಲತಿ ಶೇಖರ್ ಶಿವಮೊಗ್ಗ ನಿರ್ಮಾಣದ, ಉಪೇಂದ್ರ ಅಭಿನಯದ "ಬುದ್ಧಿವಂತ 2" ಚಿತ್ರದ ಖ್ಯಾತಿಯ ಎಂ ಜಯ್ಯರಾಮ ನಿರ್ದೇಶನದ ಹಾಗೂ "ದಿಲ್‌ವಾಲ" ಚಿತ್ರದ ಖ್ಯಾತಿಯ ಸುಮಂತ್ ಶೈಲೇಂದ್ರ ನಾಯಕನಾಗಿ ನಟಿಸಿರುವ "ಚೇಸರ್" ಚಿತ್ರದ ಟೀಸರ್ ಅನ್ನು ಧ್ರುವ ಸರ್ಜಾ ಅನಾವರಣ ಮಾಡಿದರು. ನಟರಾದ ಅರವಿಂದ್, ತ್ರಿವಿಕ್ರಮ್ ಹಾಗು ಕರಣ್ ಟೀಸರ್ ಬಿಡುಗಡೆ ಸಮಾರಂಭದಲ್ಲಿ ಉಪಸ್ಥಿತರಿದ್ದರು. "ಚೇಸರ್" ಚಿತ್ರದ ಟೀಸರ್ ಚೆನ್ನಾಗಿದೆ. ಆಕ್ಷನ್ ಸನ್ನಿವೇಶಗಳಲ್ಲಿ ಸುಮಂತ್ ಚೆನ್ನಾಗಿ ಅಭಿನಯಿಸಿದ್ದಾರೆ. ಜಯ್ಯರಾಮ ನಿರ್ದೇಶನ ಹಾಗೂ ಇಡೀ ತಂಡದ ಕಾರ್ಯ ಟೀಸರ್‌ನಲ್ಲಿ ಕಾಣುತ್ತಿದೆ. ನಿರ್ಮಾಪಕರಿಗೆ ಹಾಗೂ ಇಡೀ ತಂಡಕ್ಕೆ ಶುಭವಾಗಲಿ ಎಂದು ಧ್ರುವ ಸರ್ಜಾ ಹಾರೈಸಿದರು.











Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212